**All India Radio: Bangalore**
**29.04.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.04.2025 1.10 p.m.**
**<><><><>**

ಮುಖ್ಯಾಂಶಗಳು

- ೨೧ನೇ ಶತಮಾನದ ಅಗತ್ಯಗಳಿಗೆ ಅನುಗುಣವಾಗಿ ದೇಶದ ಶಿಕ್ಷಣ ವ್ಯವಸ್ಥೆಯ ಆಧುನೀಕರಣ - ಪ್ರಧಾನಿ ನರೇಂದ್ರ ಮೋದಿ
- ಪಹಲ್ಗಾಮ್ ದಾಳಿ ಕುರಿತಂತೆ ಪಾಕಿಸ್ತಾನಿ ಸಚಿವರ ತಪ್ಪೊಪ್ಪಿಗೆಯನ್ನು ವಿಶ್ವಸಂಸ್ಥೆಯಲ್ಲಿ ಬಹಿರಂಗಪಡಿಸಿದ ಭಾರತ
- ಪಹಲ್ಗಾಮ್ ಭಯೋತ್ಪಾದಕ ದಾಳಿ ಖಂಡಿಸಿ, ಸಂಸತ್ತಿನ ವಿಶೇಷ ಅಧಿವೇಶನ ಕರೆಯುವಂತೆ ಪ್ರಧಾನಿಗೆ ಕಾಂಗ್ರೆಸ್ ಪತ್ರ
- ಮಹಿಳಾ ತ್ರಿಕೋನ ಏಕದಿನ ಕ್ರಿಕೆಟ್ ಸರಣಿ; ಭಾರತ-ದಕ್ಷಿಣ ಆಫ್ರಿಕಾ ಪಂದ್ಯ ಪ್ರಗತಿಯಲ್ಲಿ
- ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಡೆಲ್ಲಿ ಕ್ಯಾಪಿಟಲ್ಸ್ - ಕೊಲ್ಕತ್ತಾ ನೈಟ್‌ರೈಡರ್ಸ್ ಮುಖಾಮುಖಿ

<><><><>

೨೧ನೇ ಶತಮಾನದ ಅಗತ್ಯಗಳನ್ನು ಪೂರೈಸಲು ಕೇಂದ್ರ ಸರ್ಕಾರ ದೇಶದ ಶಿಕ್ಷಣ ವ್ಯವಸ್ಥೆಯನ್ನು ಆಧುನೀಕರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿ ನಡೆದ ಯುಗ್ಮ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೇಂದ್ರ ಸರ್ಕಾರ ವಿಶ್ವದರ್ಜೆಯ ಜ್ಞಾನವನ್ನು ದೇಶದ ಪ್ರತಿಯೊಬ್ಬ ವಿದ್ಯಾರ್ಥಿಯ ಕೈಗೆಟುಕುವಂತೆ ಕ್ರಮ ಕೈಗೊಳ್ಳುತ್ತಿದೆ. ದೇಶದ ಭವಿಷ್ಯ ಯುವಜನತೆಯ ಮೇಲೆ ಅವಲಂಬಿತವಾಗಿದ್ದು, ಅವರನ್ನು ಉಜ್ವಲ ಭವಿಷ್ಯಕ್ಕಾಗಿ ಸಿದ್ಧಪಡಿಸುವುದು ನಿರ್ಣಾಯಕವಾಗಿದೆ. ನೂತನ ಶಿಕ್ಷಣ ನೀತಿ ದೇಶದಲ್ಲಿ ಪರಿವರ್ತನೆಯನ್ನು ತಂದಿದೆ ಎಂದರು.

**ಧ್ವನಿ: ಪ್ರಧಾನಮಂತ್ರಿ**

ಸಂಸ್ಕೃತದಲ್ಲಿ ಸಂಗಮ ಎಂಬ ಅರ್ಥವನ್ನು ನೀಡುವ ಈ ಸಮಾವೇಶ, ಸರ್ಕಾರ, ಶೈಕ್ಷಣಿಕ, ಕೈಗಾರಿಕೆ ಮತ್ತು ನಾವೀನ್ಯಕಾರರ ನಾಯಕರನ್ನು ಒಂದೇ ವೇದಿಕೆಯಡಿ ಒಟ್ಟುಗೂಡಿಸುವ ಮೊದಲ ಕಾರ್ಯತಂತ್ರದ ಸಮಾವೇಶವಾಗಿದೆ. ವಾಧ್ವನಿ ಪ್ರತಿಷ್ಠಾನ ಮತ್ತು ಸರ್ಕಾರಿ ಸಂಸ್ಥೆಗಳ ಸುಮಾರು ಒಂದು ಸಾವಿರ ೪೦೦ ಕೋಟಿ ರೂಪಾಯಿಗಳ ಜಂಟಿ ಹೂಡಿಕೆಯೊಂದಿಗೆ ನಡೆಯುವ ಈ ಸಮಾವೇಶ, ದೇಶದ ನಾವೀನ್ಯತೆಯ ಪಯಣಕ್ಕೆ ಕೊಡುಗೆ ನೀಡಲಿದೆ. ದೇಶದ ನಾವೀನ್ಯತೆ ಪರಿಸರ ವ್ಯವಸ್ಥೆಯಲ್ಲಿ ದೊಡ್ಡ ಪ್ರಮಾಣದ ಖಾಸಗಿ ಹೂಡಿಕೆಯನ್ನು ವೇಗಗೊಳಿಸಲು, ಶೈಕ್ಷಣಿಕ-ಉದ್ಯಮ-ಸರ್ಕಾರಿ ಪಾಲುದಾರಿಕೆಗಳನ್ನು ಬಲಪಡಿಸಲು ಮತ್ತು ವಿಕಸಿತ ಭಾರತದ ದೃಷ್ಟಿಕೋನಕ್ಕೆ ಅನುಗುಣವಾಗಿ ನಾವೀನ್ಯತೆಗೆ ವೇಗ ನೀಡುವ ಗುರಿಯನ್ನು ಸಮಾವೇಶ ಹೊಂದಿದೆ. ಸಮಾವೇಶ ಸರ್ಕಾರಿ ಅಧಿಕಾರಿಗಳು, ಉನ್ನತ ಕೈಗಾರಿಕೆ ಮತ್ತು ಶೈಕ್ಷಣಿಕ ಕ್ಷೇತ್ರದ ಗಣ್ಯರನ್ನು ಒಳಗೊಂಡ ಉನ್ನತ ಮಟ್ಟದ ದುಂಡುಮೇಜಿನ ಸಭೆಗಳು ಮತ್ತು ಚರ್ಚೆಗಳನ್ನು ಒಳಗೊಂಡಿರಲಿದೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಭಾರತ ವಿಶ್ವಸಂಸ್ಥೆಯ ಪ್ರಸ್ತಾಪಿಸಿದ್ದು, ಭಯೋತ್ಪಾದಕರಿಗೆ ತರಬೇತಿ ಹಾಗೂ ಹಣಕಾಸು ಒದಗಿಸುವ ಕುರಿತಂತೆ ಪಾಕಿಸ್ತಾನಿ ಸಚಿವರ ತಪ್ಪೊಪ್ಪಿಗೆಯನ್ನು ಸಹ ಬಹಿರಂಗಪಡಿಸಿದೆ. ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಅಸೀಫ್ ಖಾಸಗಿ ವಾಹಿನಿಯ ಸಂದರ್ಶನದಲ್ಲಿ ಇತ್ತೀಚೆಗೆ ನೀಡಿರುವ ಹೇಳಿಕೆಯನ್ನು ವಿಶ್ವಸಂಸ್ಥೆಯಲ್ಲಿ ಉಲ್ಲೇಖಿಸಿದ ಭಾರತದ ಉಪ ಖಾಯಂ ಪ್ರತಿನಿಧಿ ಯೋಜನಾ ಪಟೇಲ್, ಭಯೋತ್ಪಾದನಾ ಸಂಘಟನೆಗಳಿಗೆ ಬೆಂಬಲ ಹಣಕಾಸು ಹಾಗೂ ತರಬೇತಿ ನೀಡುತ್ತಿರುವ ಕುರಿತು ಪಾಕಿಸ್ತಾನದ ರಕ್ಷಣಾ ಸಚಿವರ ಹೇಳಿಕೆಯನ್ನು ಇಡೀ ಜಗತ್ತು ಆಲಿಸಿದೆ. ಈ ತಪ್ಪೊಪ್ಪಿಗೆಯಿಂದ ಯಾರಿಗೂ ಅಚ್ಚರಿಯಾಗಿಲ್ಲ ಬದಲಿಗೆ ಪಾಕಿಸ್ತಾನ ಜಾಗತಿಕ ಭಯೋತ್ಪಾದನೆಗೆ ಉತ್ತೇಜನ ಮತ್ತು ಪ್ರಾದೇಶಿಕ ಅಸ್ಥಿರತೆ ಮೂಲವಾಗಿರುವ ರಾಷ್ಟ್ರವೆಂದು ಬಹಿರಂಗಪಡಿಸುತ್ತದೆ ಎಂದು ಹೇಳಿದರು.

**ಧ್ವನಿ: ಯೋಜನಾ ಪಟೇಲ್ ೨೧ ಸೆಕೆಂಡ್**

<><><>

ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ನಂತರ ಅದರ ವಿರುದ್ಧದ ಹೋರಾಟಕ್ಕೆ ಭಾರತದ ಸಾಮೂಹಿಕ ಸಂಕಲ್ಪವನ್ನು ಪ್ರದರ್ಶಿಸಲು ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯಸಭಾ

ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸಂಸತ್ತಿನ ವಿಶೇಷ ಅಧಿವೇಶನ ಕರೆಯಬೇಕೆಂದು ಮನವಿ ಮಾಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಬರೆದ ಪತ್ಯೇಕ ಪತ್ರಗಳಲ್ಲಿ ಉಭಯ ನಾಯಕರು, ಈ ತಿಂಗಳ ೨೨ ರಂದು ಅಮಾಯಕರ ಮೇಲೆ ನಡೆದ ದಾಳಿಯ ವಿರುದ್ಧ ಒಗ್ಗೂಟಿನ ಮಂತ್ರವನ್ನು ಪ್ರದರ್ಶಿಸಲು ಆದಷ್ಟು ಶೀಘ್ರವೇ ವಿಶೇಷ ಅಧಿವೇಶನ ಕರೆಯುವುದು ಸೂಕ್ತ ಎಂದು ಹೇಳಿದ್ದಾರೆ. ಪಹಲ್ಗಾಮ್ ಭಯೋತ್ಪಾದನೆ ದಾಳಿಯ ಕುರಿತು ಸಂಸತ್ತಿನ ವಿಶೇಷ ಅಧಿವೇಶನ ನಡೆಸಬೇಕೆಂದು ಮನವಿ ಮಾಡಿದ್ದಾಗಿ ಕಾಂಗ್ರೆಸ್ ಪಕ್ಷವನ್ನು ಬಿಜೆಪಿ ಟೀಕಿಸಿದೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ವಕ್ತಾರ ಶಹಜಾದ್ ಪೂನಾವಾಲಾ ಭಯೋತ್ಪಾದಕ ದಾಳಿಯ ಕುರಿತು ಕಾಂಗ್ರೆಸ್‌ನ ಸಾಮೂಹಿಕ ನಿರ್ಣಯ ಏನೆಂಬುದನ್ನು ಮೊದಲು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸ್ಪಷ್ಟಪಡಿಸಬೇಕು. ಸರ್ವಪಕ್ಷ ಸಭೆಯಲ್ಲಿ ಅವರು ಕಾಂಗ್ರೆಸ್ ಪಕ್ಷ ಕೇಂದ್ರ ಸರ್ಕಾರದೊಂದಿಗೆ ನಿಲ್ಲುವ ಕುರಿತಂತೆ ತಿಳಿಸಿದ್ದರೂ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾರತ-ಪಾಕಿಸ್ತಾನದ ಯುದ್ಧ ಬೇಡ ಎಂದು ಹೇಳಿದ್ದಾರೆ. ಕೆಲವು ಕಾಂಗ್ರೆಸ್ ನಾಯಕರು ಭಾರತದ ಮೇಲೆ ಆರೋಪ ಹೊರಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

<><><><>

ಕೇಂದ್ರ ಕೃಷಿ, ರೈತ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನಿನ್ನೆ ನವದೆಹಲಿಯಲ್ಲಿ ದೇಶಾದ್ಯಂತದ ಎಲ್ಲಾ ೭೩೧ ಕೃಷಿ ವಿಜ್ಞಾನ ಕೇಂದ್ರಗಳೊಂದಿಗೆ ವರ್ಚುವಲ್ ಸಂವಾದ ನಡೆಸಿದರು. ತಮ್ಮ ಭಾಷಣದಲ್ಲಿ ಅಭಿವೃದ್ಧಿಗಾಗಿ ಅಭಿಯಾನದ ರೂಪದಲ್ಲಿ ಕೆಲಸ ಮಾಡುವ ಅವಶ್ಯಕತೆಯಿದೆ ಎಂದು ಒತ್ತಿ ಹೇಳಿದರು. ಕೃಷಿ ಒಂದು ವಿಶಾಲ ವಲಯವಾಗಿದೆ. ಜನಸಂಖ್ಯೆಯ ಸುಮಾರು ೪೫ ಪ್ರತಿಶತದಷ್ಟು ಜನರು ನೇರವಾಗಿ ಕೃಷಿಯೊಂದಿಗೆ ಸಂಬಂಧ ಹೊಂದಿದ್ದಾರೆ ಮತ್ತು ದೇಶದ ಜಿಡಿಪಿಯ ಸುಮಾರು ೧೮ ಪ್ರತಿಶತ ಕೃಷಿ ವಲಯದಿಂದ ಬರುತ್ತದೆ. ಈ ವಿಶಾಲ ಪಾತ್ರವನ್ನು ಮತ್ತಷ್ಟು ಬಲಪಡಿಸಲು ನಿರಂತರ ಮತ್ತು ಪರಿಣಾಮಕಾರಿ ಪ್ರಯತ್ನಗಳ ಅಗತ್ಯವಿದೆ ಎಂದು ಸಚಿವರು ಹೇಳಿದರು. ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರನ್ನುದ್ದೇಶಿಸಿ ಮಾತನಾಡಿದ ಸಚಿವರು, ರೈತರಿಗೆ ಸಾಮರ್ಥ್ಯ ನಿರ್ಮಾಣ ತರಬೇತಿಯ ಮಹತ್ವವನ್ನು ಎತ್ತಿ ತೋರಿಸಿದರು. ಉತ್ತಮ ತರಬೇತಿ ಮತ್ತು ಜಾಗೃತಿಯ ಮೂಲಕ ದೇಶದ ರೈತರು

ಸ್ವಾವಲಂಬಿಗಳಾಗುತ್ತಾರೆ ಮತ್ತು ಸಬಲರಾಗುತ್ತಾರೆ ಎಂದು ಅವರು ಹೇಳಿದರು. ಮಣ್ಣಿನ ಗುಣಮಟ್ಟವನ್ನು ಕಾಪಾಡಿಕೊಳ್ಳಲು ರಸಗೊಬ್ಬರಗಳ ಸಮತೋಲಿತ ಬಳಕೆಗೆ ಅನುಗುಣವಾಗಿ ಸರಿಯಾದ ಸಲಹೆ ನೀಡುವ ಮೂಲಕ ಕೃಷಿಯ ದಿಕ್ಕಿನಲ್ಲಿ ರೈತರು ಮತ್ತಷ್ಟು ಶ್ರಮಿಸಬೇಕೆಂದು ಅವರು ಕೇಳಿಕೊಂಡರು.

<><><>

ಅಮೆರಿಕಾದೊಂದಿಗೆ ವ್ಯಾಪಾರ ಒಪ್ಪಂದಗಳನ್ನು ಅಂತಿಮಗೊಳಿಸುವ ದೇಶಗಳಲ್ಲಿ ಭಾರತ ಮೊದಲ ರಾಷ್ಟ್ರವಾಗುವ ಸಾಧ್ಯತೆಯಿದೆ ಎಂದು ಅಮೆರಿಕಾ ಆರ್ಥಿಕ ಸಚಿವ ಸ್ಕಾಟ್ ಬೆಸೆಂಟ್ ಹೇಳಿದ್ದಾರೆ. ಭಾರತದ ಮುಕ್ತ ವಾತಾವರಣ ಮತ್ತು ಸಿಮೀತ ಸುಂಕರಹಿತ ನೀತಿಗಳು ತ್ವರಿತ ಪ್ರಗತಿಗೆ ಪ್ರಮುಖ ಕಾರಣವಾಗಿವೆ. ಈ ತಿಂಗಳ ಆರಂಭದಲ್ಲಿ ಅಮೆರಿಕಾ ವ್ಯಾಪಕ ಸುಂಕಗಳನ್ನು ಪರಿಚಯಿಸಿದ್ದು, ಹೆಚ್ಚುತ್ತಿರುವ ಜಾಗತಿಕ ವ್ಯಾಪಾರ ಉದ್ವಿಗ್ನತೆಯ ನಡುವೆ ಈ ಘೋಷಣೆ ಬಂದಿದೆ. ಕಳೆದ ವಾರ ಭಾರತಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಅಮೆರಿಕಾ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ವಿವಿಧ ವ್ಯಾಪಾರ ವಿಷಯಗಳ ಬಗ್ಗೆ ಚರ್ಚಿಸಿದ್ದರು.

<><><>

ಅಮೆರಿಕಾದ ವಿವಿಧ ಭಾಗಗಳಲ್ಲಿ ಭಾರತೀಯ ಸಮುದಾಯದ ಸದಸ್ಯರು ಸೇರಿ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರೊಂದಿಗೆ ತಾವಿದ್ದೇವೆ ಎಂಬ ಒಗ್ಗಟ್ಟನ್ನು ವ್ಯಕ್ತಪಡಿಸಲು ಅಹೋರಾತ್ರಿ ಪ್ರಾರ್ಥನಾ ಸಭೆಗಳನ್ನು ನಡೆಸಿದರು. ನ್ಯೂಜೆರ್ಸಿಯ ಎಡಿಸನ್‌ನಲ್ಲಿ, ಭಾರತೀಯ-ಅಮೆರಿಕನ್ ಸಮುದಾಯದ ಸುಮಾರು ೨೦ ಸಂಘಟನೆಗಳನ್ನು ಪ್ರತಿನಿಧಿಸುವ ೩೦೦ ಕ್ಕೂ ಹೆಚ್ಚು ಸದಸ್ಯರು ಒಟ್ಟುಗೂಡಿ ಭೀಕರ ಭಯೋತ್ಪಾದಕ ದಾಳಿಯನ್ನು ಖಂಡಿಸಿದರು. ಎಡಿಸನ್ ಮೇಯರ್ ಸ್ಯಾಮ್ ಜೋಶಿ ಮತ್ತು ನ್ಯೂಜೆರ್ಸಿ ಅಸೆಂಬ್ಲಿ ಸದಸ್ಯ ರಾಬರ್ಟ್ ಕರಬಿಂಚಕ್ ಸಹ ಭಯೊತ್ಪಾದಕರ ದಾಳಿಯಲ್ಲಿ ಮೃತರ ಗೌರವಾಥ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕನೆಕ್ಟಿಕಟ್‌ನಲ್ಲಿ ಪ್ರತ್ಯೇಕ ಶ್ರದ್ಧಾಂಜಲಿ ಸಮಾರಂಭವನ್ನು ನಡೆಸಲಾಯಿತು. ಏತನ್ಮಧ್ಯೆ, ಪ್ರಪಂಚದಾದ್ಯಂತದ ಭಾರತೀಯ ಸಮುದಾಯದ ಸದಸ್ಯರು ಭಯೋತ್ಪಾದಕ ದಾಳಿಯ ವಿರುದ್ಧ ಬೃಹತ್ ಪ್ರತಿಭಟನೆಗಳನ್ನು ನಡೆಸುತ್ತಿದಾರೆ. ಸಂತ್ರಸ್ತರಿಗೆ ನ್ಯಾಯವನ್ನು ಕೋರಿ ಕೆನಡಾ, ಡೆನ್ಮಾರ್ಕ್, ಇಂಗ್ಲೆಂಡ್, ಫ್ರಾನ್ಸ್, ಫಿನ್ಲ್ಯಾಂಡ್, ಜರ್ಮನಿ, ಸ್ಪೇನ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

<><><><>

ಇಂದು ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ತ್ರಿಕೋನ ಏಕದಿನ ಕ್ರಿಕೆಟ್ ಸರಣಿಯಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಟಾಸ್ ಗೆದ್ದು, ಬ್ಯಾಟಿಂಗ್ ಆಯ್ದುಕೊಂಡಿರುವ ಭಾರತದ ವನಿತೆಯರ ತಂಡ ಇತ್ತೀಚಿನ ವರದಿ ಬಂದಾಗ ೪೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೨೨ ರನ್ ಗಳಿಸಿ ಆಡುತ್ತಿದೆ.

<><><><>

ದೆಹಲಿಯ ಅರುಣ್‌ಜೇಟ್ಲಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಕೊಲ್ಕತ್ತಾ ನೈಟ್‌ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಜೈಪುರದ ಸವಾಯಿ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡ ೮ ವಿಕೆಟ್‌ಗಳ ಜಯ ದಾಖಲಿಸಿದೆ. ರಾಜಸ್ಥಾನ್ ಪರ ೧೪ ವರ್ಷದ ಯುವ ಕ್ರಿಕೆಟಿಗ ವೈಭವ್ ಸೂರ್ಯವಂಶಿ ಕೇವಲ ೩೮ ಎಸೆತೆಗಳಲ್ಲಿ ೧೦೧ ರನ್ ಗಳಿಸಿ ರಾಜಸ್ಥಾನ್ ತಂಡ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಅವರ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶನಕ್ಕಾಗಿ ವೈಭವ್‌ಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ನೀಡಲಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>